**ಹಿರಿಯ ಸಿವಿಲ್ ನ್ಯಾಯಾಧಿಶರು ಮತ್ತು ಜೆಎಂಎಫ್ ಸಿ ರವರ ನ್ಯಾಯಾಲಯ,**

**ದೇವದುರ್ಗ.**

**ಸಿ.ಸಿ. ನಂ.321/2023**

ದೂರುದಾರರುಃ ಕರ್ನಾಟಕ ರಾಜ್ಯ,
ಗಬ್ಬೂರು ಪೋಲಿಸ್ ಠಾಣೆ.

**ವಿರುದ್ದ**

ಆರೋಪಿತರುಃ

1. ಮುಮ್ತಾಜ್ ತಂದೆ ಮಹೇಬೂಬ,
   ವಯಸ್ಸುಃ 36 ವರ್ಷ, ಉದ್ಯೋಗಃ ಮನೆಕೆಲಸ,
   ಸಾಃ ಹನುಮಾಪೂರ.

2. ಕಾಸಿಂಸಾಬ ತಂದೆ ಯಮನೂರುಸಾಬ,
   ವಯಸ್ಸುಃ 71 ವರ್ಷ, ಉದ್ಯೋಗಃ ಒಕ್ಕಲುತನ,
   ಸಾಃ ಬೂದಿನಾಳ.

3. ರಾಜಸಾಬ ತಂದೆ ಕಾಸಿಂಸಾಬ,
   ವಯಸ್ಸುಃ 42 ವರ್ಷ, ಉದ್ಯೋಗಃ ಒಕ್ಕಲುತನ,
   ಸಾಃ ಬೂದಿನಾಳ.

4. ಶರೀಫ್ ಸಾಬ ತಂದೆ ಕಾಸಿಂಸಾಬ,
   ವಯಸ್ಸುಃ 34 ವರ್ಷ, ಉದ್ಯೋಗಃ ಒಕ್ಕಲುತನ,
   ಸಾಃ ಬೂದಿನಾಳ.

5. ಹುಸೇನಬೀ ಗಂಡ ಕಾಸಿಂಸಾಬ,
   ವಯಸ್ಸುಃ 62 ವರ್ಷ, ಉಃ ಕೂಲಿ,
   ಸಾಃ ಬೂದಿನಾಳ.

6. ಟಿಪು ತಂದೆ ಮಹೆಬೂಬ ಸಾಬ,
   ವಯಸ್ಸುಃ 19 ವರ್ಷ, ಉದ್ಯೋಗಃ ಒಕ್ಕಲುತನ,
   ಸಾಃ ಹನುಮಾಪೂರ.

**ದೋಷರೋಪಣೆ**

ಶ್ರೀ. ಸುರೇಶ ಅಣ್ಣಪ್ಪ ಸವದಿ., ಹಿರಿಯ ಸಿವಿಲ್ ನ್ಯಾಯಾಧಿಶರು ಮತ್ತು ಜೆ.ಎಂ. ಎಫ್. ಸಿ ರವರ ನ್ಯಾಯಾಧೀಶರು, ದೇವದುರ್ಗ, ಈ ಮೂಲಕ ಆರೋಪಿತರಾದ ನಿಮ್ಮಗಳ ಮೇಲೆ ಮಾಡುವ ದೋಷಾರೋಪಣೆ ಏನೆಂದರೆ-

ದಿನಾಂಕ 25.02.2022 ರಂದು ಬೆಳಗ್ಗೆ 08:00 ಗಂಟೆ ಸಮಯದಲ್ಲಿ ಗಬ್ಬೂರು ಪೊಲೀಸ್ ಠಾಣಾ ಸರಹದ್ದು, ದೇವದುರ್ಗ ತಾಲ್ಲೂಕು, ಬೂದಿನಾಳ ಗ್ರಾಮದ ಮಾರೆಮ್ಮ ದೇವಸ್ಥಾನದ ಮುಂದೆ ಆರೋಪಿತರಾದ ನೀವುಗಳು ಅಪರಾಧವೆಸಗುವ ಏಕೋದ್ದೇಶದಿಂದ ಅಕ್ರಮಕೂಟವನ್ನು ರಚಿಸಿಕೊಂಡು ಅದರ ಸದಸ್ಯರಾಗುವ ಮೂಲಕ ಭಾರತ ದಂಡ ಸಂಹಿತೆ ಕಲಂ 143 ಸಹವಾಚಕ ಕಲಂ 149 ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಸದರಿ ಏಕೋದ್ದೇಶದಿಂದ ಮುಂದುವರೆದು, ಆರೋಪಿತರಾದ ನೀವುಗಳು, ಸದರಿ ಅಕ್ರಮ ಕೂಟದ ಸದಸ್ಯರಾಗಿ ದೊಂಬಿ ಮಾಡುವ ಮೂಲಕ ಭಾರತ ದಂಡ ಸಂಹಿತೆ ಕಲಂ 147 ಸಹವಾಚಕ ಕಲಂ 149 ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಸದರಿ ಏಕೋದ್ದೇಶದಿಂದ ಮುಂದುವರೆದು, 2 ರಿಂದ 6 ನೇ ಆರೋಪಿತರಾದ ನೀವು ಸಾಕ್ಷಿ-4 ರವರಿಗೆ ಅಂಗಿ ಹಿಡಿದು ಎಳೆದಾಡಿದ್ದು, 5 ನೇ ಆರೋಪಿತನು ಸಾಕ್ಷಿ-1 ರವರಿಗೆ ಕೈಯಿಂದ ಮೈಕೈಗೆ ಹೊಡೆದಿದ್ದು, 3 ನೇ ಆರೋಪಿತನು ಕೈಯಿಂದ ಕಪಾಳಕ್ಕೆ ಹೊಡೆದಿದ್ದು, 2, 4 ಮತ್ತು 6 ನೇ ಆರೋಪಿತರಾದ ನೀವು ಸಾಕ್ಷಿ-2 ಕೈಯಿಂದ ಹೊಡೆದು ಮತ್ತು ಕಾಲಿನಿಂದ ಒದ್ದು ಮೂಕಪೆಟ್ಟು ಮಾಡಿ ಆ ಮೂಲಕ ಭಾರತ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 149 ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಸದರಿ ಏಕೋದ್ದೇಶದಿಂದ ಮುಂದುವರೆದು, 1 ಮತ್ತು 5 ನೇ ಆರೋಪಿತರಾದ ನೀವುಗಳು ಚಾಸಾ-1 ರವರ ಮನೆಯ ಒಳಗೆ ಜಗಳ ಮಾಡುವ ಉದ್ದೇಶದಿಂದ ಅತಿಕ್ರಮ ಪ್ರವೇಶ ಮಾಡಿ ಚಾಸಾ-1 ರವರನ್ನು ಮನೆಯಿಂದ ಹೊರಗಡೆ ಎಳೆದುಕೊಂಡು ಬರುವ ಮೂಲಕ ಭಾರತ ದಂಡ ಸಂಹಿತೆ ಕಲಂ 448 ಸಹವಾಚಕ ಕಲಂ 149 ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಸದರಿ ಏಕೋದ್ದೇಶದಿಂದ ಮುಂದುವರೆದು, 1 ನೇ ಆರೋಪಿತರಾದ ನೀವು, ಸಾಕ್ಷಿ-1 ರವರಿಗೆ ಚಪ್ಪಲಿಯಿಂದ ಬೆನ್ನಿಗೆ ಹೊಡೆದು ಆ ಮೂಲಕ ಭಾರತ ದಂಡ ಸಂಹಿತೆ ಕಲಂ 355 ಸಹವಾಚಕ ಕಲಂ 149 ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಸದರಿ ಏಕೋದ್ದೇಶದಿಂದ ಮುಂದುವರೆದು, 1 ನೇ ಆರೋಪಿತರಾದ ನೀವು, ಸಾಕ್ಷಿ-4 ರವರ ಮೋಟಾರ್ ಸೈಕಲ್‌ನ್ನು ತಡೆದು ನಿಲ್ಲಿಸಿ ಆ ಮೂಲಕ ಭಾರತ ದಂಡ ಸಂಹಿತೆ ಕಲಂ 341 ಸಹವಾಚಕ ಕಲಂ 149 ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಸದರಿ ಏಕೋದ್ದೇಶದಿಂದ ಮುಂದುವರೆದು, 1 ರಿಂದ 6 ನೇ ಆರೋಪಿತರಾದ ನೀವುಗಳು, ಸಾಕ್ಷಿ-1 ಮತ್ತು 4 ರವರಿಗೆ ಅವಾಚ್ಯವಾಗಿ ಬೈದು ಆ ಮೂಲಕ ಭಾರತ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 149 ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಸದರಿ ಏಕೋದ್ದೇಶದಿಂದ ಮುಂದುವರೆದು, 1 ರಿಂದ 6 ನೇ ಆರೋಪಿತರಾದ ನೀವುಗಳು, ಸಾಕ್ಷಿ-1 ಮತ್ತು 4 ರವರಿಗೆ ಜಿ-ಫಾರಮ್ ನಮ್ಮ ಹೆಸರಿಗೆ ಮಾಡಿಸಿಕೊಡುಲಿಲ್ಲವೆಂದರೆ ನಿಮ್ಮನ್ನು ಸಾಯಿಸಿ ಬಿಡುತ್ತೇವೆ ಅಂತಾ ಜೀವದ ಬೇದರಿಕೆ ಹಾಕಿ ಆ ಮೂಲಕ ಭಾರತ ದಂಡ ಸಂಹಿತೆ ಕಲಂ 506 ಸಹವಾಚಕ ಕಲಂ 149 ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಸದರೀ ಅಪರಾಧಗಳು ಈ ನ್ಯಾಯಾಲಯದ ಸಂಜ್ಞೆಯಲ್ಲಿ ಬರುತ್ತವೆ ಮತ್ತು ಸದರಿ ವಿಚಾರಣೆಯು ನನ್ನ ಸಮಕ್ಷಮ ನಡೆಯಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.

(ಈ ದೋಷಾರೋಪಣೆಯನ್ನು ಈ ದಿನ ದಿನಾಂಕಃ 25.03.2025 ರಂದು ಆರೋಪಿತರಿಗೆ ತೆರೆದ ನ್ಯಾಯಾಲಯದಲ್ಲಿ ಕನ್ನಡ ಭಾಷೆಯಲ್ಲಿ ಓದಿ ಹೇಳಿ ಆತನ ಉತ್ತರವನ್ನು ಯಥಾವತ್ತಾಗಿ ದಾಖಲಿಸಿದೆ)

ಓ. ಹೇ. ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್ ಸಿ ದೇವದುರ್ಗ.

**ಹಿರಿಯ ಸಿವಿಲ್ ನ್ಯಾಯಾಧಿಶರು ಮತ್ತು ಜೆಎಂಎಫ್ ಸಿ ರವರ ನ್ಯಾಯಾಲಯ,**

**ದೇವದುರ್ಗ.**

**ಸಿ.ಸಿ. ನಂ.321/2023**

ದೂರುದಾರರುಃ ಕರ್ನಾಟಕ ರಾಜ್ಯ,
ಗಬ್ಬೂರು ಪೊಲೀಸ್ ಠಾಣೆ.

**ವಿರುದ್ದ**

ಆರೋಪಿತರಾದ
1. ಮುಮ್ತಾಜ್ ತಂದೆ ಮಹೇಬೂಬ
2. ಕಾಸಿಂಸಾಬ ತಂದೆ ಯಮನೂರುಸಾಬ
3. ರಾಜಸಾಬ ತಂದೆ ಕಾಸಿಂಸಾಬ
4. ಶರೀಫ್ ಸಾಬ ತಂದೆ ಕಾಸಿಂಸಾಬ
5. ಹುಸೇನಬೀ ಗಂಡ ಕಾಸಿಂಸಾಬ
6. ಟಿಪು ತಂದೆ ಮಹೆಬೂಬ ಸಾಬ

**:: ಆಪಾದನೆ ::**

1. ನಿಮಗೆ ಓದಿ ಹೇಳಿದ ಆಪಾದನೆ ಅರ್ಥವಾಯಿತಾ?

ಉತ್ತರಃ-

2. ನೀವು ತಪ್ಪು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಆಗಬೇಕಾ?

ಉತ್ತರಃ-

ಮೇಲಿನ ಹೇಳಿಕೆಯನ್ನು ಆಪಾದಿತರಿಗೆ ತಿಳಿಯುವಂತೆ ಆತನ ಭಾಷೆಯಲ್ಲಿ ಓದಿ, ಹೇಳಿ ತಿಳಿಸಿ ಅವರ ಹೇಳಿಕೆ ಪಡೆದುದಾಗಿ ದೃಢೀಕರಿಸಿರುತ್ತೇನೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ., ದೇವದುರ್ಗ.

ಆರೋಪಿತರ ಸಹಿ